



ಅರುಣ ಪಿ. ಭಟ್ಟ

# ವಾರಭವಿಷ್ಯ: 02.04.2026ರಿಂದ 08.04.2026ರವರೆಗೆ



**ಮೇಷ**

ವೃತ್ತಿ ಜೀವನದಲ್ಲಿ ಕೀರ್ತಿ ಲಭಿಸುತ್ತದೆ. ಉದ್ಯೋಗಸ್ಥರಿಗೆ ಜವಾಬ್ದಾರಿ ಹೆಚ್ಚಾಗಲಿದೆ. ವಿದ್ಯಾರ್ಥಿಗಳು ಹೆಚ್ಚು ಜಾಗರೂಕರಾಗಿ ಇರಬೇಕು. ಅದರಲ್ಲೂ ಯಾರ ಜತೆಗೆ ಸ್ನೇಹ ಮಾಡಿದ್ದೀರಿ. ನಿಮ್ಮ ಗುರಿಯಿಂದ ಗಮನ ಬೇರೆಡೆ ಹೋಗದಂತೆ ನೋಡಿಕೊಂಡರೆ ಮಾತ್ರ ಉತ್ತಮ ಫಲಿತಾಂಶ ನಿರೀಕ್ಷೆ ಮಾಡಲು ಸಾಧ್ಯ. ಖರ್ಚಿನ ಪ್ರಮಾಣ ಹೆಚ್ಚಾಗುತ್ತದೆ. ಶುಭದಿನ: 03. ಗಣಪತಿಗೆ ದೂರ್ವಾರ್ಚನೆ ಮಾಡಿರಿ.



**ವೃಷಭ**

ತೀರ್ಥಕ್ಷೇತ್ರ ಪ್ರವಾಸ ಮಾಡಬೇಕು ಅಂದುಕೊಂಡವರಿಗೆ, ಹಿರಿಯರ ಸೇವೆ ಮಾಡಲು ಬಯಸುವವರಿಗೆ ಅದಕ್ಕೆ ಅವಕಾಶ ದೊರೆಯಲಿದೆ. ಉನ್ನತ ಶಿಕ್ಷಣ ಮಾಡುತ್ತಿರುವವರಿಗೆ ಉತ್ತಮ ಪ್ರಗತಿ. ಮಾಮೂಲಿ ಕೆಲಸಗಳ ಹೊರತಾಗಿ ಇತರ ವಿಚಾರಗಳ ಕಡೆಗೆ ನಿಮ್ಮ ಗಮನ ಹೋಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ವೇತನದಲ್ಲಿ ಏರಿಕೆಯಾಗುವ ಸಾಧ್ಯತೆ ಇದೆ. ಶುಭದಿನ: 06. ಸೌಂದರ್ಯಲಹರಿ ಪಠಿಸಿರಿ.



**ಮಿಥುನ**

ಕೌಟುಂಬಿಕ ವಿಚಾರದಲ್ಲಿ ಕೆಲವು ಕಷ್ಟಗಳು ಎದುರಾಗಲಿವೆ. ಇರುವ ಸಮಸ್ಯೆಗಳ ಜತೆಗೆ ಇದೂ ಸೇರ್ಪಡೆಯಾಗುತ್ತದೆ. ನಿಮ್ಮ ಪ್ರಯತ್ನ ಭವಿಷ್ಯದ ಯಶಸ್ಸಿಗೆ ಸಹಕಾರಿ ಆಗಿರುತ್ತದೆ. ಸಂಗಾತಿ ಜತೆಗೆ ನಡೆಸುವ ಮಾತುಕತೆ ಉದ್ವಿಗ್ನತೆಗೆ ಕಾರಣವಾಗಬಹುದು. ಉದ್ಯೋಗ ಸ್ಥಳದಲ್ಲಿ ಕೆಲವು ತಾಂತ್ರಿಕ ಸಮಸ್ಯೆಗಳು ಸೃಷ್ಟಿಯಾಗುತ್ತವೆ. ಶುಭದಿನ: 02. ಹನುಮಾನ್ ಚಾಲೀಸ್ ಓದಿರಿ.



**ಕಟಕ**

ವಾರದ ಆರಂಭದಲ್ಲಿ ವೈವಾಹಿಕ ಜೀವನದಲ್ಲಿ ಸಂತಸ ಇರುತ್ತದೆ. ಉದ್ಯೋಗ ಕ್ಷೇತ್ರದಲ್ಲಿ ಯಶಸ್ಸು ಪಡೆಯಲು ಅವಕಾಶಗಳು ದೊರೆಯಲಿವೆ. ಆತ್ಮವಿಶ್ವಾಸ ಹೆಚ್ಚಾಗಲಿದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಕುಟುಂಬ ಸದಸ್ಯರ ನಡವಳಿಕೆಯಿಂದ ಗೊಂದಲಕ್ಕೆ ಸಿಲುಕಿಕೊಳ್ಳುತ್ತೀರಿ. ಆರೋಗ್ಯದಲ್ಲಿ ಕೂಡ ಏರಿಳಿತಗಳು ಕಾಣಿಸಿಕೊಳ್ಳುತ್ತವೆ. ಶುಭದಿನ: 03. ಈಶ್ವರನಿಗೆ ರುದ್ರಾಭಿಷೇಕ ಮಾಡಿರಿ.



**ಸಿಂಹ**

ವೈದ್ಯಕೀಯ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ. ಉದ್ಯೋಗ ನಿಮಿತ್ತ ದೂರ ಪ್ರಯಾಣ ಮಾಡಬೇಕಾಗಬಹುದು. ಆದ್ಯತೆ ಮೇಲೆ ಕೆಲಸ ಕಾರ್ಯಗಳನ್ನು ಮಾಡುತ್ತೀರಿ. ಈ ತೀರ್ಮಾನದಿಂದ ಭವಿಷ್ಯದಲ್ಲಿ ಅನುಕೂಲವಾಗಲಿದೆ. ವಾರದ ಅಂತ್ಯಕ್ಕೆ ಸರಿಯುತ್ತಾ ನಿಮ್ಮ ಸಮಸ್ಯೆಗಳು ಹೆಚ್ಚುತ್ತವೆ. ಖರ್ಚಿನ ಪ್ರಮಾಣ ಹೆಚ್ಚಾಗಲಿದೆ. ಈ ಸನ್ನಿವೇಶದಿಂದ ಆತಂಕವಾಗುತ್ತದೆ. ಶುಭದಿನ: 07. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.



**ಕನ್ಯಾ**

ಮಕ್ಕಳ ಪ್ರಗತಿಯಿಂದ ಹೆಮ್ಮೆ ಉಂಟಾಗುತ್ತದೆ. ಭವಿಷ್ಯದ ಬಗ್ಗೆ ಹೆಚ್ಚು ಗಮನ ನೀಡುತ್ತೀರಿ. ಮನೆಯನ್ನು ಬದಲಿಸುವ ಸಾಧ್ಯತೆ ಇದೆ. ಶಿಕ್ಷಣದಲ್ಲಿ ಯಶಸ್ಸು ದೊರೆಯಲಿದೆ. ಆದಾಯ ಅತ್ಯುತ್ತಮವಾಗಿ ಇರುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿ ಜತೆ ಬಾಂಧವ್ಯ ಗಟ್ಟಿಯಾಗಿರುತ್ತದೆ. ಕಾನೂನು ಪ್ರಕರಣಗಳು ನಿಮ್ಮ ಪರವಾಗಿ ನಡೆಯಲಿವೆ. ಶುಭದಿನ: 03. ವಿಷ್ಣು ಸಹಸ್ರನಾಮ ಪಠಿಸಿರಿ.



**ತುಲಾ**

ರಾಜಕೀಯ ಕ್ಷೇತ್ರದಲ್ಲಿ ಇರುವವರಿಗೆ ಯಶಸ್ಸಿದೆ. ವ್ಯಾಪಾರಸ್ಥರಿಗೆ ಉತ್ತಮ ಸಮಯ ಇದು. ಉದ್ಯೋಗಿಗಳಿಗೆ ದೊರೆಯುತ್ತಿರುವ ಸವಲತ್ತು ಮತ್ತಷ್ಟು ವಿಸ್ತರಣೆಯಾಗಲಿದೆ. ವಾರದ ಮಧ್ಯ ಭಾಗದಲ್ಲಿ ಕೆಲಸ ಕಾರ್ಯಗಳು ವಿಪರೀತ ವೇಗವಾಗಿ ಪೂರ್ಣಗೊಳ್ಳುತ್ತವೆ. ಆದಾಯ ಹೆಚ್ಚು ಮಾಡಿಕೊಳ್ಳುವುದಕ್ಕೂ ಅತ್ಯುತ್ತಮ ಸಮಯ. ಹಣಕಾಸಿನ ವೆಚ್ಚ ಹೆಚ್ಚಾಗಿರುತ್ತದೆ. ಶುಭದಿನ: 05. ಲಿಂಗಾಷ್ಟಕ ಪಠಿಸಿರಿ.



**ವೃಶ್ಚಿಕ**

ವಾರದ ಶುರುವಿನಲ್ಲಿ ನಿಮ್ಮ ಸಾಮರ್ಥ್ಯ ಹೆಚ್ಚಲಿದೆ. ಅದೃಷ್ಟ ನಿಮ್ಮ ಪಾಲಿಗೆ ಇರಲಿದೆ. ಆರ್ಥಿಕ ವ್ಯವಹಾರಗಳನ್ನು ನೋಡಿಕೊಳ್ಳುತ್ತಿರುವವರಿಗೆ ಉತ್ತಮ ಪ್ರಗತಿ. ಯಶಸ್ಸು ನಿಮ್ಮ ಪಾಲಿಗೆ ಸಿಗಲಿದೆ. ವಾರದ ದ್ವಿತೀಯಾರ್ಧದಲ್ಲಿ ಆದಾಯದಲ್ಲಿ ಹೆಚ್ಚಳವಾಗಲಿದೆ. ವೈಯಕ್ತಿಕ ಸಂಬಂಧವು ಶಾಂತಯುತವಾಗಿ, ಸಮಾಧಾನದಿಂದ ಇರಲಿದ್ದು, ಇದರಿಂದ ನಿಮಗೆ ಸಂತೋಷವಾಗಲಿದೆ. ಶುಭದಿನ: 06. ಚಂಡಿ ಪಾರಾಯಣ ಮಾಡಿರಿ.



**ಧನಸ್ಸು**

ಭೂಮಿ ಖರೀದಿ ಪ್ರಕ್ರಿಯೆಯಲ್ಲಿ ತೊಡಗಲಿದ್ದೀರಿ. ವ್ಯಾಜ್ಯಗಳು ಇದ್ದಲ್ಲಿ ನಿವಾರಿಸಿಕೊಳ್ಳಲು ಸಫಲರಾಗುತ್ತೀರಿ. ವಾಸ್ತವದಲ್ಲಿ ಸಂತೋಷ ಪಡುವುದಕ್ಕೆ ಬೇಕಾದ ಸೌಕರ್ಯಗಳನ್ನು ಪಡೆಯಲಿದ್ದೀರಿ. ಹಣಕಾಸಿನ ವಿಚಾರದಲ್ಲಿ ಭಿನ್ನಾಭಿಪ್ರಾಯಗಳು ಮೂಡಲಿವೆ. ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಇರುವವರಿಗೆ ಅನುಕೂಲಕರವಾದ ಸನ್ನಿವೇಶ ಸೃಷ್ಟಿಯಾಗಲಿದೆ. ಶುಭದಿನ: 04. ಗಣಪತಿ ಸುಬ್ರಮಣ್ಯ ಜಪ ಮಾಡಿರಿ.



**ಮಕರ**

ವೃತ್ತಿ ಜೀವನದಲ್ಲಿ ದೊರೆಯುವ ಅವಕಾಶಗಳನ್ನು ಸದ್ಬಳಕೆ ಮಾಡುವ ಕಡೆಗೆ ಗಮನ ಇರುತ್ತದೆ. ನಿಮ್ಮ ಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯಲಿದೆ. ವ್ಯವಹಾರಗಳ ವಿಸ್ತರಣೆಗೆ ಅನುಕೂಲ ಆಗಲಿದೆ. ಹವಾಮಾನ ಮತ್ತು ಇತರ ಕಾರಣಗಳಿಗೆ ದೈಹಿಕ ಬಾಧೆಗಳು ನಿಮ್ಮನ್ನು ಕಾಡಬಹುದು. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿ ಜತೆಗೆ ಉತ್ತಮ ಸಮಯ ಕಳೆಯಲಿದ್ದೀರಿ. ಶುಭದಿನ: 05. ನವದುರ್ಗಾ ಆರಾಧನೆ ಮಾಡಿರಿ.



**ಕುಂಭ**

ಅಂದುಕೊಂಡ ಕೆಲಸಗಳನ್ನು ಶುರು ಮಾಡುವುದಕ್ಕೆ ಸೂಕ್ತವಾದ ಸಮಯ. ನಿಮ್ಮ ಪ್ರತಿಭೆಯನ್ನು ಹೆಚ್ಚಿಸಿಕೊಳ್ಳಲು ಸಿದ್ಧತೆ ಮಾಡಿಕೊಳ್ಳುತ್ತೀರಿ. ನಿಮ್ಮ ವಿವೇಚನಾಶಕ್ತಿ ಹಾಗೂ ಧೈರ್ಯ ಅಗಾಧ ಪ್ರಮಾಣದಲ್ಲಿ ಹೆಚ್ಚಲಿದೆ. ವ್ಯಾಪಾರ ಒಪ್ಪಂದವನ್ನು ಪೂರ್ಣಗೊಳಿಸುವ ಸಲುವಾಗಿ ಹೆಚ್ಚು ಹಣ ಮೀಸಲಿಡಬೇಕಾಗುತ್ತದೆ. ಆರೋಗ್ಯ ಸಮಸ್ಯೆಗಳು ಸ್ವಲ್ಪ ಮಟ್ಟಿಗೆ ಕಾಡಬಹುದು. ಶುಭದಿನ: 04. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.



**ಮೀನ**

ಕೆಲಸ ಕಾರ್ಯಗಳನ್ನು ಪೂರೈಸಲು ಶ್ರಮಿಸಲಿದ್ದೀರಿ. ಆ ನಿಮ್ಮ ಶ್ರಮಕ್ಕೆ ತಕ್ಕಂತೆ ಫಲಿತಾಂಶ ದೊರೆಯಲಿದೆ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಸಂಗಾತಿ ಜತೆಗಿನ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ಭಿನ್ನಾಭಿಪ್ರಾಯ ಇದ್ದಲ್ಲಿ ಬಗೆಹರಿಸಿಕೊಳ್ಳಲಿದ್ದೀರಿ. ಸಣ್ಣ ಪುಟ್ಟ ವಿಚಾರಗಳಿಗೂ ಬಿಕ್ಕಟ್ಟು ಎದುರಾಗಲಿದೆ. ವೈವಾಹಿಕ ಜೀವನವು ಸಂತುಷ್ಟವಾಗಿರುತ್ತದೆ. ಶುಭದಿನ: 06. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.